**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಹೊಸಕೋಟೆ**
**ಸಿ.ಸಿ. 432–2014**

| | | |
|---|---|---|
| ಹೆಸರು | ನಾಗರಾಜ್ | ಪ್ರಾ.ಸಾ.1 |
| ತಂದೆ ಹೆಸರು | ವೆಂಕಟಪ್ಪ | ಚಾ.ಸಾ.1 |
| ವಯಸ್ಸು | 37 ವರ್ಷ | |
| ಕೆಲಸ | ಬಿ.ಎಂ.ಟಿ.ಸಿ. ಕಂಡಕ್ಟರ್ | ಸಾ.ಪ್ರ.ವ.ಬೋ |
| ಹಾಲಿ ವಾಸ | ಶಿವನಾಪುರ | ದಿ: 02.11.2021 |

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿ ರವರಿಂದ: –**

ನನ್ನ ತಮ್ಮ ಮತ್ತು ಚಾ.ಸಾ.3 ಮರಳು ತುಂಬುವ ಕೆಲಸಕ್ಕೆ ಹೋಗುತ್ತಿದ್ದರು. 2014ರಲ್ಲಿ ಜನವರಿಯಲ್ಲಿ ಗಲಾಟೆ ಆಗಿದ್ದು, ಆರೋಪಿ ರಾಡಿನಿಂದ ನನ್ನ ತಮ್ಮ ಮುಂಜುನಾಥನಿಗೆ ಹಲ್ಲೆ ಮಾಡಿರುತ್ತಾರೆ. ನಂತರ ಚಾ.ಸಾ.3 ನನಗೆ ಸದರಿ ವಿಚಾರ ತಿಳಿಸಲಾಗಿ , ನಾನು ಸ್ಥಳಕ್ಕೆ ಹೋದಾಗ, ನನ್ನ ತಮ್ಮ ಪ್ರಜ್ಞೆ ತಪ್ಪಿ ಬಿದ್ದಿದ್ದ, ನಾನು ಅವನನ್ನು ಎಂ.ವಿ.ಜೆ ಆಸ್ಪತ್ರೆಗೆ ಕರೆದುಕೊಂಡು ಹೋಗಿ, ನಂತರ ಪೊ.ಠಾಣೆಯಲ್ಲಿ ದೂರು ನೀಡಿರುತ್ತೇನೆ. ನಂತರ ಅದೇ ದಿನ ಪೊಲೀಸರು ಸ್ಥಳಕ್ಕೆ ಬಂದು, ಮಹಜರು ಜರುಗಿಸಿ, ನನ್ನ ಸಹಿ ಪಡೆದುಕೊಂಡಿರುತ್ತಾರೆ. ಸಾಕ್ಷಿ ದೂರಿನಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು, ದೂರನ್ನು ನಿಪಿ.1 ಎಂದು, ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಮಹಜರನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ.2 ಎಂದು, ಸಾಕ್ಷಿಯ ಸಹಿಯನ್ನು ನಿಪಿ.2(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಕಬ್ಬಿಣ್ಣದ ರಾಡನ್ನು ನೋಡಿ ಗುರುತಿಸಿದ್ದು, ಅದನ್ನು ಮು.ಮಾ.1 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಆರೋಪಿ ಪರ ವಕೀಲರು ಗೈರು ಹಾಜರಿದ್ದು, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರುವಿಚಾರಣೆ ಇಲ್ಲ.**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಿಸಲಾಯಿತು)**
**ಓ.ಹೇ.ಕೇ.ಸ.ಇದೆ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು, ಹೊಸಕೋಟೆ.**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಹೊಸಕೋಟೆ**
**ಸಿ.ಸಿ. 432–2014**

| | | |
|---|---|---|
| ಹೆಸರು | ಮಂಜುನಾಥ | ಪ್ರಾ.ಸಾ.2 |
| ತಂದೆ ಹೆಸರು | ಮುನಿಸ್ವಾಮಪ್ಪ | ಚಾ.ಸಾ.2 |
| ವಯಸ್ಸು | 35 ವರ್ಷ | |
| ಕೆಲಸ | ಕೂಲಿ | ಸಾ.ಪ್ರ.ವ.ಬೋ |
| ಹಾಲಿ ವಾಸ | ಶಿವನಾಪುರ | ದಿ: 02.11.2021 |

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿ ರವರಿಂದ: –**

2014ರಲ್ಲಿ ನಾನು ಕೂಲಿ ಕೆಲಸಕ್ಕೆ ಹೋಗಿದ್ದೇ. ನಾನು, ಚಾ.ಸಾ.1,3,4 ರವರು ಮರಳನ್ನು ತುಂಬುತ್ತಿದ್ದೇವು. ಆ ಸಮಯದಲ್ಲಿ ಆರೋಪಿ ಹಿಂಬದಿಯಿಂದ ಬಂದು ನನ್ನ ತಲೆಗೆ , ಕೈ ಸೊಂಟಕ್ಕೆ ರಾಡಿನಿಂದ ಹೊಡೆದಿರುತ್ತಾರೆ. ಆಗ ನಾನು ಪ್ರಜ್ಞೆ ತಪ್ಪಿ ಬಿದ್ದಿರುತ್ತೇನೆ. ಆಗ ಚಾ.ಸಾ.1 ನನ್ನನ್ನು ಆಸ್ಪತ್ರೆಗೆ ಸೇರಿಸಿದರು. ಅದೇ ದಿನ ಸಂಜೆ ನನ್ನ ಅಣ್ಣ ದೂರನ್ನು ನೀಡಿರುತ್ತಾರೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮು.ಮಾ.1 ಅನ್ನು ನೋಡಿ ಗುರುತಿಸಿರುತ್ತಾರೆ. .

**ಈ ಹಂತದಲ್ಲಿ ಆರೋಪಿ ಪರ ವಕೀಲರು ಗೈರು ಹಾಜರಿದ್ದು, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಿಸಲಾಯಿತು)

**ಓ.ಹೇ.ಕೇ.ಸ.ಇದೆ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು, ಹೊಸಕೋಟೆ.**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಹೊಸಕೋಟೆ**
**ಸಿ.ಸಿ. 432–2014**

| | | |
|---|---|---|
| ಹೆಸರು | ಸುಬ್ಬರಾಯಪ್ಪ | ಪ್ರಾ.ಸಾ.3 |
| ತಂದೆ ಹೆಸರು | ಮುನಿಯಪ್ಪ | ಚಾ.ಸಾ.3 |
| ವಯಸ್ಸು | 38 ವರ್ಷ | |
| ಕೆಲಸ | ಕೂಲಿ | ಸಾ.ಪ್ರ.ವ.ಬೋ |
| ಹಾಲಿ ವಾಸ | ಶಿವನಾಪುರ | ದಿ: 02.11.2021 |

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿ ರವರಿಂದ: –**

ಜನವರಿ, 2014ರಲ್ಲಿ ನಾನು ಕೂಲಿ ಕೆಲಸಕ್ಕೆ ಹೋಗಿದ್ದೇ. ನಾನು, ಚಾ.ಸಾ.2,4 ರವರು ಮರಳನ್ನು ತುಂಬುತ್ತಿದ್ದೇವು. ಆ ಸಮಯದಲ್ಲಿ ಆರೋಪಿ ಹಿಂಬದಿಯಿಂದ ಬಂದು ಚಾ.ಸಾ.2ರವರಿಗೆ ತಲೆಗೆ , ಕೈ ಸೊಂಟಕ್ಕೆ ರಾಡಿನಿಂದ ಹೊಡೆದಿರುತ್ತಾರೆ. ಆಗ ಚಾ.ಸಾ.2ರವರು ಪ್ರಜ್ಞೆ ತಪ್ಪಿ ಬಿದ್ದಿರುತ್ತೇನೆ. ಆಗ ಚಾ.ಸಾ.1 ರವರು, ಚಾ.ಸಾ.2ರವರನ್ನು ಆಸ್ಪತ್ರೆಗೆ ಸೇರಿಸಿದರು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮು.ಮಾ.1 ಅನ್ನು ನೋಡಿ ಗುರುತಿಸಿರುತ್ತಾರೆ. .ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಈ ಹಂತದಲ್ಲಿ ಆರೋಪಿ ಪರ ವಕೀಲರು ಗೈರು ಹಾಜರಿದ್ದು, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**
**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಿಸಲಾಯಿತು)
ಓ.ಹೇ.ಕೇ.ಸ.ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು, ಹೊಸಕೋಟೆ.